ವಿಷಯ :– ಮಾಗಡಿ ತಾಲ್ಲೂಕು ಎತ್ತಿನ ಮನೆ ಗುರಗಂಜಿ ಗುಡ್ಡದ ನೀರಾವರಿ ಯೋಜನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 489 (1101)

ಶ್ರೀ ಹೆಚ್. ಎಂ. ರೇವಣ್ಣ (ಮಾಗಡಿ) :– ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮಾಗಡಿ ತಾಲ್ಲೂಕಿನ ಎತ್ತಿನಮನೆ ಗುರಗಂಜಿಗುಡ್ಡ ನೀರಾವರಿ ಯೋಜನೆ ಕಾರ್ಯ ಸ್ಥಗಿತ ಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ, ಸರ್ಕಾರದವರು ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ?

ಇ) ಈ ಯೋಜನೆ ಅಡಿಯಲ್ಲಿ ಮುಳುಗಡೆಯಾದ ರೈತರಿಗೆ ಪುನರ್‌ವಸತಿಯನ್ನು ಕಲ್ಪಿಸಲಾಗಿದೆಯೇ?

ಈ) ಹಾಗಿಲ್ಲದಿದ್ದಲ್ಲಿ, ಯಾವಾಗ ಪುನರ್‌ವಸತಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುವುದು ?

ಶ್ರೀ ಕೆ. ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು) :–

ಅ) ಈಗ ಕಾಮಗಾರಿಗಳು ನಡೆಯುತ್ತಿರುತ್ತವೆ.

ಆ) ಉದ್ಭವಿಸುವುದಿಲ್ಲ.

ಇ) ಈ ಯೋಜನೆಯಲ್ಲಿ ಮುಳುಗಡೆಯಾಗುವ ಗ್ರಾಮಗಳನ್ನು ಸ್ಥಳಾಂತರಿಸಿ ಪುನರ್‌ವಸತಿ ಸೌಲಭ್ಯ ಒದಗಿಸುವ ವಿಷಯವು ಪರಿಶೀಲನೆಯಲ್ಲಿದೆ.

ಈ) ಉದ್ಭವಿಸುವುದಿಲ್ಲ

ವಿಷಯ :– ಕೋಲಾರ ಜಿಲ್ಲೆಯಲ್ಲಿ ಕೃಷಿ ಪಂಪುಸೆಟ್ಟುಗಳಿಗೆ ವಿದ್ಯುತ್ ಸರ್ವಿಸ್ ನೀಡಿರುವ ಬಗ್ಗೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 490 (958)

ಶ್ರೀ ಎಂ. ನಾರಾಯಣ ಸ್ವಾಮಿ (ಬೇತಮಂಗಲ) :– ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಕೋಲಾರ ಜಿಲ್ಲೆಯಲ್ಲಿ ಜನವರಿಯಿಂದ ಇಲ್ಲಿಯವರೆಗೆ ಕೃಷಿ ವಿದ್ಯುತ್ ಸರ್ವಿಸ್ ನೀಡುವ ಬಗ್ಗೆ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಗೆ ಬಂದ ಅರ್ಜಿಗಳು ಎಷ್ಟು ? (ತಾಲ್ಲೂಕುವಾರು ವಿವರಗಳನ್ನು ನೀಡುವುದು) ?

ಆ) ಅವುಗಳಲ್ಲಿ ಎಷ್ಟು ಪಂಪುಸೆಟ್ಟುಗಳಿಗೆ ವಿದ್ಯುತ್ ಸರ್ವಿಸ್ ನೀಡಲಾಗಿದೆ, ಎಷ್ಟು ಅರ್ಜಿಗಳ ಎಸ್ಟಿಮೇಟ್ ಮಾಡಲಾಗಿದೆ ಎಷ್ಟು ಅರ್ಜಿಗಳು ಬಾಕಿ ಉಳಿದಿವೆ (ತಾಲ್ಲೂಕುವಾರು ವಿವರ ನಿಡುವುದು) ?

ಇ) ಇವುಗಳಿಗೆಲ್ಲಾ ಇನ್ನು ಎಷ್ಟು ದಿನಗಳಲ್ಲಿ ವಿದ್ಯುತ್ ಸರ್ವಿಸ್ ನೀಡಲಾಗುವುದು ?

ಈ) ಕಳೆದ 2 ವರ್ಷಗಳಿಂದ ಎಸ್ಟಿಮೇಟ್ ಆಗಿ ವರ್ಕ್ ಆರ್ಡರ್ ಆಗಿ ಸರ್ವಿಸ್ ಕೊಡದೆ ಇರುವ ಅರ್ಜಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರಗಳನ್ನು ನೀಪುವುದು).

ಉ) ಈ ಅರ್ಜಿಗಳನ್ನು ಎಷ್ಟು ದಿನಗಳಲ್ಲಿ ವಿಲೇವಾರಿ ಮಾಡಲಾಗುವುದು (ಸರ್ವಿಸ್ ನೀಡುವುದರ ಮೂಲಕ)

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು) :–

ಅ) ಅನುಬಂಧದಲ್ಲಿ ನೀಡಲಾಗಿದೆ.